C.C.. No. 3726/2024 CW:13
PW:7

**1ನೇ ಹೆಚ್ಚುವರಿ ಹಿರಿಯ ವ್ಯವಹಾರಿಕ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಪುತ್ತೂರು , ದ.ಕ.**

**C.C..No. 3726/2024**

| | |
|---|---|
| ಸಾಕ್ಷಿದಾರರ ಹೆಸರುಃ | ಶ್ರೀ . ಬಿ. ಕೆ. ಮಂಜಯ್ಯ |
| ತಂದೆಯ ಹೆಸರುಃ | ಕರಿಯಪ್ಪ |
| ವಯಸ್ಸುಃ | 62 ವರ್ಷ |
| ಉದ್ಯೋಗಃ | ನಿವೃತ್ತ ಡಿವೈಎಸ್ ಪಿ. |
| ವಾಸಸ್ಥಳಃ | ಬೆಂಗಳೂರು |

ದಿನಾಂಕ 11-06-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ : ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜನಕರಿಂದಃ**

ನಾನು ದಿನಾಂಕವ 06-09-2008 ರಿಂದ 26-07-2011 ರ ವರೆಗೆ ಪುತ್ತೂರು ಗ್ರಾಮಾಂತರ ವೃತ್ತದ ಸಿ.ಪಿ.ಐ ಎಂದು ಕರ್ತವ್ಯ ನಿರ್ವಹಿಸಿದ್ದೇನೆ. ಪುತ್ತೂರು ಗ್ರಾಮಾಂತರ ಪೊಲೀಸು ಠಾಣೆ ನನ್ನ ಅಧಿಕಾರ ವ್ಯಾಪ್ತಿಗೆ ಬರುತ್ತಿತ್ತು.

ದಿನಾಂಕ 06-07-2009 ರಂದು ಈ ಪ್ರಕರಣದ ಕಡತವನ್ನು ಪಿಎಸ್ ಐ ಪ್ರವೀಣ್ ಜಿ ಎಂಬುವವರಿಂದ ಪಡೆದು ಪರಿಶೀಲಿಸಿರುತ್ತೇನೆ. ಅದೇ ದಿನ ತಕ್ಷೀರು ನಡೆದ ಸ್ಥಳಕ್ಕೆ ಭೇಟಿ ನೀಡಿರುತ್ತೇನೆ. ಚಾ.ಸಾ.1 ರವರು ಮರುಹೇಳಿಕೆಯನ್ನು ದಾಖಲಿಸಿಕೊಂಡಿರುತ್ತೇನೆ.

ದಿನಾಂಕ 22-06-2010 ರಂದು ಬಂಟ್ವಾಳ ವೃತ್ತ ನಿರೀಕ್ಷಕರಾದ ಚಾ.ಸಾ.12 ರವರು ಬಂಟ್ವಾಳ ನಗರ ಠಾಣಾ ಮೊಕದ್ದಮೆ ನಂ.95/2009 ಕ್ಕೆ ಸಂಬಂಧಿಸಿದ ಪ್ರಕರಣದಲ್ಲಿ ದಸ್ತಗಿರಿಯಾಗಿದ್ದ ಈ ಪ್ರಕರಣದ 1 ಮತ್ತು 2ನೇ ಅರೋಪಿತರಿಂದ ಸ್ವಾಧೀನಪಡಿಸಿಕೊಂಡ ಚಿನ್ನಾಭರಣಗಳನ್ನು ಮಾನ್ಯ ನ್ಯಾಯಾಲಯದಿಂದ ಅನುಮತಿ ಪಡೆದು ಸಂಬಂಧಪಟ್ಟ ದಾಖಲಾತಿಗಳೊಂದಿಗೆ ಹಾಜರುಪಡಿಸಿದ್ದು ಅವುಗಳನ್ನು ಸ್ವೀಕರಿಸಿ ಮಾಲುಪಟ್ಟಿಗೆ ನಮೂದಿಸಿ ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ.

ಈ ಪ್ರಕರಣದ 1 ಮತ್ತು 2ನೇ ಆರೋಪಿತರನ್ನು ಮಾನ್ಯ ನ್ಯಾಯಾಲಯದ ಆದೇಶದಂತೆ ದಿನಾಂಕ 07-07-2010 ರಂದು ಪೊಲೀಸು ಕಸ್ಟಡಿಗೆ ಪಡೆದಿರುತ್ತೇನೆ. ಆ ಸಮಯದಲ್ಲಿ ಆರೋಪಿತರ ತನಿಖೆ ಮಾಡಿ ಅವರಿಂದ ಸ್ವ ಖುಷಿ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. 1 ಮತ್ತು 2ನೇ ಆರೋಪಿತರು ತಮ್ಮ ಸ್ವ ಖುಷಿ ಹೇಳಿಕೆಯಲ್ಲಿ ತಮ್ಮನ್ನು ಸೇರಿಸಿ 3ನೇ ಆರೋಪಿಯಾದ ಮಾಡ ಸ್ವಾಮಿ ಎನ್ನುವವರು ಕೂಡಾ ಪ್ರಕರಣದಲ್ಲಿ ಭಾಗಿಯಾಗಿದ್ದಾನೆ ಎಂದು ತಿಳಿಸಿರುತ್ತಾರೆ. ನಂತರ 1 ಮತ್ತು 2ನೇ ಆರೋಪಿತರನ್ನು ದಸ್ತಗಿರಿ ಮಾಡಿ ನಂತರ ಅವರನ್ನು ಮಾನ್ಯ ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ.

ಅದೇ ದಿನ ಚಾ.ಸಾ.2 ರವರು ಚಿನ್ನಾಭರಣಗಳನ್ನು ನೋಡಿ ಗುರುತಿಸಿದ ಬಗ್ಗೆ ಮರುಹೇಳಿಕೆಯನ್ನು ನೀಡಿರುತ್ತಾರೆ. ದಿನಾಂಕ 27-07-2010 ರಂದು ಈ ಪ್ರಕರಣದ ತನಿಖೆ ಪೂರ್ಣಗೊಂಡ 3ನೇ ಆರೋಪಿಯ ಪತ್ತೆಗಾಗಿ ಪ್ರಯತ್ನ ಮಾಡಿ ಕೂಡಾ ಆತನು ತಲೆಮರೆಸಿಕೊಂಡಿದ್ದ ಕಾರಣ ಆತನನ್ನು ಸೇರಿಸಿ ಇತರೆ ಆರೋಪಿಗಳ ವಿರುದ್ಧ ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

ದಿನಾಂಕ 13-08-2010 ರಂದು ಮಾನ್ಯ ನ್ಯಾಯಾಲಯದ ಆದೇಶದಂತೆ ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ ಚಿನ್ನಾಭರಣಗಳನ್ನು ಚಾ.ಸಾ.1 ರವರಿಗೆ ರಶೀದಿ ಪಡೆದು ಬಿಡುಗಡೆ ಮಾಡಿರುತ್ತೇನೆ.

ಸಾಕ್ಷಿಯು ದಿನಾಂಕ 09-04-2010 ರ ಸ್ವತ್ತು ಸ್ವಾಧೀನತಾ ಮಹಜರಿನ ಯಥಾ ನಕಲನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿ.ಪಿ.3 ಎಂದು ಗುರುತಿಸಲಾಗಿರುತ್ತದೆ. ಸಿ.ಆರ್. ನಂ. 95/2009 ಕ್ಕೆ ಸಂಬಂಧಿಸಿದ ದೂರು ಹಾಗೂ ಪ್ರ.ವ.ವರದಿಯ ಯಥಾ ನಕಲನ್ನು ಸಾಕ್ಷಿ ನೋಡಿ ಗುರುತಿಸಿದ್ದು ದೂರಿನ ಯಥಾ ಪ್ರತಿಯನ್ನು ನಿ.ಪಿ.5 ಎಂದು ಮತ್ತು ಪ್ರ.ವ.ವರದಿ ಯಥಾ ನಕಲನ್ನು ನಿ.ಪಿ.6 ಎಂದು ಗುರುತಿಸಲಾಯಿತು. ಸಾಕ್ಷಿಯು ರಶೀದಿಯ ಯಥಾ ನಕಲನ್ನು ನೋಡಿ ಗುರುತಿಸಿದ್ದು ಅದನ್ನು ನಿ.ಪಿ.7 ಎಂದು ಗುರುತಿಸಲಾಯಿತು.

ನಾನು ಬಿಡುಗಡೆ ಗೊಳಿಸಿದ ಚಿನ್ನಾಭರಣಗಳನ್ನು ನೋಡಿದರೆ ಗುರುತಿಸುತ್ತೇನೆ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ. ಎಂ.ಎಂ. ವಕೀಲರಿಂದಃ**

ನಾನು ಸಲ್ಲಿಸಿರುವ ದೋಷಾರೋಪಣಾ ಪಟ್ಟಿಯಲ್ಲಿ 3ನೇ ಆರೋಪಿಯ ಪಾತ್ರ ಏನಿದೆ ಎಂದು ನಮೂದಿಸಿದ್ದೇನೆ. 3ನೇ ಆರೋಪಿಯಿಂದ ಈ ಪ್ರಕರಣದಲ್ಲಿ ಕಳುವಾದ ಚಿನ್ನಾಭರಣಗಳನ್ನು ವಶಪಡಿಸಿಕೊಂಡಿಲ್ಲ. ಈ ಪ್ರಕರಣದಲ್ಲಿ 3ನೇ ಆರೋಪಿಯ ಯಾವುದೇ ಪಾತ್ರ ಇಲ್ಲ ಎಂದರೆ ಸರಿಯಲ್ಲ.

ಈ ಪ್ರಕರಣದಲ್ಲಿ ಪ್ರ.ವ.ವರದಿಯನ್ನು ಮುಖ್ಯ ಪೇದೆ ಸುಂದರ ಎನ್ನುವವರು ತಯಾರಿಸಿದ್ದಾರೆ . ಅವರನ್ನು ಹಾಗೂ ಪಿಎಸ್ ಐ ಪ್ರವೀಣ್ ಜಿ ಎನ್ನುವವರನ್ನು ಕಣ್ತಪ್ಪಿನಿಂದ ದೋಷಾರೋಪಣಾ ಪಟ್ಟಿಯಲ್ಲಿ ಸಾಕ್ಷಿದಾರರನ್ನಾಗಿ ಮಾಡಿಲ್ಲ. ನಾನು ತಕ್ಷೀರು ಸ್ಥಳಕ್ಕೆ ಭೇಟಿ ನೀಡಿದಾಗ ಮಹಜರು ಕ್ರಮ ಜರುಗಿಸಿಲ್ಲ.

ಬಂಟ್ವಾಳ ಪೊಲೀಸು ಠಾಣೆಯ ಅಧಿಕಾರಿಯವರಿಂದ ಈ ಪ್ರಕರಣದ ಚಿನ್ನಾಭರಣಗಳನ್ನು ಸ್ವೀಕರಿಸುವಾಗ ಯಾವುದೇ ಮಹಜರು ಮಾಡಿಲ್ಲ. ನಾನು ಘಟನಾ ಸ್ಥಳಕ್ಕೆ ಹೋಗಿಲ್ಲ ಎಂದರೆ ಸರಿಯಲ್ಲ. ಈ ಪ್ರಕರಣದ ಚಿನ್ನಾಭರಣಗಳಿಗೂ ಹಾಗೂ 3ನೇ ಆರೋಪಿಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ನಾನು ಪೊಲೀಸು ಠಾಣೆಯಲ್ಲಿ 1 ಮತ್ತು 2ನೇ ಆರೋಪಿತರ ಸ್ವಖುಷಿ ಹೇಳಿಕೆಯನ್ನು ಪಡೆದಿದ್ದೇನೆ. 1 ಮತ್ತು 2 ನೇ ಆರೋಪಿತರು ನನ್ನ ಸಮಕ್ಷಮ 3ನೇ ಆರೋಪಿ ಈ ಪ್ರಕರಣದಲ್ಲಿ ಭಾಗಿಯಾಗಿರುವ ಬಗ್ಗೆ ಯಾವುದೇ ಹೇಳಿಕೆಯನ್ನು ನೀಡಿಲ್ಲ ಎಂದರೆ ಸುಳ್ಳು. ನಾನು ಚಾ.ಸಾ.2 ರವರ ಮರುಹೇಳಿಕೆಯನ್ನು ಪಡೆದಿಲ್ಲ ಎಂದರೆ ಸರಿಯಲ್ಲ. ನಾನು ಸುಳ್ಳು ಕೇಸಿಗೆ ಪೂರಕವಾಗಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಿರಪರಾಧಿಯಾದ 3ನೇ ಆರೋಪಿಯ ವಿರುದ್ಧ ಸುಳ್ಳು ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ.

ನನ್ನ ಉಕ್ತಲೇಖನ ರೀತ್ಯಾ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓ, ಹೇ, ಕೇ, ಸರಿ ಇದೆ.

1ನೇ ಹೆಚ್ಚುವರಿ ಹಿರಿಯ ವ್ಯವಹಾರಿಕ ನ್ಯಾಯಾಧೀಶರು ಮತ್ತು
ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿ, ಪುತ್ತೂರು ದ.ಕ.